# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 28(209) |
| ಸದಸ್ಯರ ಹೆಸರು | : | ಶ್ರೀ ಕಾಂತರಾಜ್ (ಬಿಎಂಎಲ್)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 07.12.2020 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಜೆ.ಓ.ಸಿ ಕೋರ್ಸ್ ಗಳನ್ನು ಮುಚ್ಚಲು ಸರ್ಕಾರವು ಆದೇಶಿಸಿರುವುದು ನಿಜವೇ; ಹಾಗಿದ್ದಲ್ಲಿ ಯಾವಾಗ ಆದೇಶಿಸಲಾಗಿದೆ; | ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 29 ಟಿವಿಇ 2010, ದಿನಾಂಕ:07.05.2010ರಲ್ಲಿ ರಾಜ್ಯದಲ್ಲಿ ಜೆ.ಓ.ಸಿ ಕೋರ್ಸ್ ಗಳನ್ನು ಮುಚ್ಚಲು ಆದೇಶಿಸಿದೆ. |
| ಆ) | ಜೆ.ಓ.ಸಿ ಕೋರ್ಸ್ ಗಳನ್ನು ಮುಚ್ಚಿದಾಗ ಅಲ್ಲಿದ್ದ ಸಿಬ್ಬಂದಿಗಳನ್ನು ಬೇರೆ ಇಲಾಖೆಗಳಲ್ಲಿ ವಿಲೀನಗೊಳಿಸಲು ಸರ್ಕಾರವು ಆದೇಶಿಸಿರುವುದು ಯಾವಾಗ; | ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕ 2011, ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 22 ಶಾಸನ 2011, ದಿನಾಂಕ:06.04.2011ರಲ್ಲಿ ಬೇರೆ ಇಲಾಖೆಗಳಲ್ಲಿ ವಿಲೀನಗೊಳಿಸಲು ಆದೇಶಿಸಿದೆ. |
| ಇ) | ಈ ಆದೇಶದನ್ವಯ ಬೇರೆ ಇಲಾಖೆಗಳಲ್ಲಿ ಇಲ್ಲಿಯವರೆಗೆ ವಿಲೀನಗೊಳಿಸಿದ ಸಿಬ್ಬಂದಿಗಳ ಸಂಖ್ಯೆ ಎಷ್ಟು; | ಸರ್ಕಾರದ ಆದೇಶದ್ವಯ ಸರ್ಕಾರದ ಬೇರೆ ಬೇರೆ ಇಲಾಖೆಗಳಿಗೆ 1263 ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ 1668 ವೃತ್ತಿ ಶಿಕ್ಷಣ ಸಿಬ್ಬಂದಿಯವರನ್ನು ವಿಲೀನಗೊಳಿಸಲಾಗಿದೆ (ವಿಲೀನಗೊಳಿಸಲಾದ ಒಟ್ಟು ಸಂಖ್ಯೆ 2931). |

| | | |
|---|---|---|
| ಈ) | 5 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿದ ಇನ್ನು ಎಷ್ಟು ಸಿಬ್ಬಂದಿಗಳನ್ನು ವಿಲೀನಗೊಳಿಸುವುದು ಬಾಕಿ ಇದೆ; | 05 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿದವರ ಸಿಬ್ಬಂದಿಗಳ ಸಂಖ್ಯೆ:530 |
| ಉ) | ಬಾಕಿ ಉಳಿದಿರುವ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ಸರ್ಕಾರ ಬೇರೆ ಇಲಾಖೆಗಳಲ್ಲಿ ವಿಲೀನಗೊಳಿಸಲಾಗುವುದು? | 05 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿ ಬಾಕಿ ಇರುವ 530 ವೃತ್ತಿ ಶಿಕ್ಷಣ ಸಿಬ್ಬಂದಿಯವರನ್ನು ವಿಲೀನ ವಿಧೇಯಕ 2011 ರನ್ವಯ ವಿಲೀನಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

**ಸಂಖ್ಯೆ: ಇಪಿ 33 ಟಿವಿಇ 2020**

S. Su

**(ಎಸ್ .ಸುರೇಶ್ ಕುಮಾರ್)**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಹಾಗೂ ಸಕಾಲ ಸಚಿವರು